# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 975(82)

ಸದಸ್ಯರ ಹೆಸರು : ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ.

(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 20-12-2018

ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| 1 | ಕೊಡಗು ಜಿಲ್ಲಾ ಕೇಂದ್ರ ಮಡಿಕೇರಿಯಲ್ಲಿರುವ ಏಕೈಕ ಸಭಾಂಗಣ ಕಾವೇರಿ ಕಲಾಕ್ಷೇತ್ರ ಶಿಥಿಲಾವಸ್ಥೆ ಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಅಭಿವೃದ್ಧಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು); ಇಲ್ಲವಾದಲ್ಲಿ, ಇದರ ದುರಸ್ತಿಗೆ ಸರ್ಕಾರದ ಕ್ರಮಗಳೇನು; | ಈ ವಿಷಯವು ಇಲಾಖಾ ವ್ಯಾಪ್ತಿಗೆ ಬರುವುದಿಲ್ಲ. |
| 2 | ಕೊಡಗು ಜಿಲ್ಲಾ ಕೇಂದ್ರದಲ್ಲಿ ಸರ್ಕಾರಿ ಮತ್ತು ವಿವಿಧ ಸಭೆ ಸಮಾರಂಭಗಳಿಗೆ ಸೂಕ್ತ ಸಭಾಂಗಣ ಇಲ್ಲದಿರುವುದರಿಂದ ಹೊಸ ಸಭಾಭವನವನ್ನು ಕಟ್ಟಲು ಸರ್ಕಾರದ ಕ್ರಮಗಳೇನು? (ವಿವರ ನೀಡುವುದು). | ಕೊಡಗು ಜಿಲ್ಲಾ ಕೇಂದ್ರ ಮಡಿಕೇರಿಯಲ್ಲಿ ಸಾಂಸ್ಕೃತಿಕ ಸಮುಚ್ಚಯ ನಿರ್ಮಾಣ ಮಾಡಲು ರೂ. 400.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ದಿನಾಂಕ 24-05-2013ರ ಆದೇಶದಲ್ಲಿ ನೀಡಿದೆ. ಸರ್ಕಾರದ ಆದೇಶ ಸಂಖ್ಯೆ : ಸಂಕಇ 471 ಕಸಧ 2005 ದಿನಾಂಕ 15-03-2006 ರಲ್ಲಿ 50.00 ಲಕ್ಷರೂಪಾಯಿಗಳನ್ನು ಹಾಗೂ ಸರ್ಕಾರದ ಆದೇಶ ಸಂಖ್ಯೆ ಸಂಕಇ 471 ಕಸಧ 2005 ದಿನಾಂಕ 18-12-2006ರಲ್ಲಿ 57.00 ಲಕ್ಷ ರೂಪಾಯಿಗಳನ್ನು ಮತ್ತು ಸರ್ಕಾರದ ಆದೇಶ ಸಂಖ್ಯೆ ಕಸಂವಾ 197 ಕಸಧ 2017 ದಿನಾಂಕ 18-12-2017ರಲ್ಲಿ 200.00 ಲಕ್ಷಗಳನ್ನು ಹೀಗೆ ಒಟ್ಟು ರೂ. 307.00 ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಬಿಡುಗಡೆ ಮಾಡಲಾಗಿದೆ. ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಳ್ಳಲಾಗುತ್ತಿದೆ. ಈ ಸಮುಚ್ಚಯದಲ್ಲಿ ಸಭಾಂಗಣ, ಗ್ರಂಥಾಲಯ, ಮ್ಯೂಸಿಯಂ, ಆರ್ಟ್‌ಗ್ಯಾಲರಿ, ಕೊಡವ ಮತ್ತು ಅರೆಭಾಷೆ ಅಕಾಡೆಮಿಗಳ ಕಚೇರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿಗಳು ಒಳಗೊಂಡಂತೆ ವಿನ್ಯಾಸಗೊಳಿಸಲಾಗಿದ್ದು ಕಾಮಗಾರಿ ಪ್ರಗತಿಯಲ್ಲಿದೆ. |

ಸಂಖ್ಯೆ: ಕಸಂವಾ 70 ಕವಿಸ 2018

(ಡಾ. ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.